Akashvani: Bangalore
National Bulletin In Kannada
17.01.2026: 7.35AM
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
17.01.2026: 7.35AM
********

**ಮುಖ್ಯಾಂಶಗಳು :**

1. ಹೌರಾ - ಗುವಾಹಟಿ ನಡುವಿನ ದೇಶದ ಮೊಟ್ಟ ಮೊದಲ ವಂದೇ ಭಾರತ್ ಸ್ಲೀಪರ್ ರೈಲಿಗೆ ಇಂದು ಪ್ರಧಾನಿ ನರೇಂದ್ರ ಮೋದಿ ಹಸಿರು ನಿಶಾನೆ
2. ಕಳಪೆ ಗುಣಮಟ್ಟದ ಬಿತ್ತನೆ ಬೀಜ ಪೂರೈಕೆಗೆ ೩೦ ಲಕ್ಷ ರೂಪಾಯಿವರೆಗೆ ದಂಡ ವಿಧಿಸಲು ಪ್ರಸ್ತಾವನೆ - ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್
3. ಮಹಾರಾಷ್ಟ್ರ ಸ್ಥಳೀಯ ಸಂಸ್ಥೆಗಳ ಚುನಾವಣೆ; ಏಕೈಕ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿದ ಬಿಜೆಪಿ
4. ೧೯ ವರ್ಷದೊಳಗಿನ ಪುರುಷರ ಏಕದಿನ ವಿಶ್ವಕಪ್ ಕ್ರಿಕೆಟ್; ಎ ಗುಂಪಿನ ಪಂದ್ಯದಲ್ಲಿಂದು ಭಾರತ - ಬಾಂಗ್ಲಾದೇಶ ಮುಖಾಮುಖಿ

*********

ಪ್ರಧಾನಿ ನರೇಂದ್ರ ಮೋದಿ ಪಶ್ಚಿಮ ಬಂಗಾಳ ಮತ್ತು ಅಸ್ಸಾಂ ರಾಜ್ಯಗಳಿಗೆ ಇಂದಿನಿಂದ ೨ ದಿನಗಳ ಕಾಲ ಭೇಟಿ ನೀಡಲಿದ್ದಾರೆ. ತಮ್ಮ ಪ್ರವಾಸದ ಮೊದಲನೇ ದಿನ ಪ್ರಧಾನಿ ಅವರು, ಪಶ್ಚಿಮ ಬಂಗಾಳದ ಮಾಲ್ಡಾ ನಗರ ರೈಲು ನಿಲ್ದಾಣದಲ್ಲಿ ಹೌರಾ ಮತ್ತು ಗುವಾಹಟಿಯ ಕಾಮಾಕ್ಯ ನಡುವಿನ ದೇಶದ ಮೊಟ್ಟಮೊದಲ 'ವಂದೇ ಭಾರತ್ ಸ್ಲೀಪರ್' ರೈಲು ಸಂಚಾರಕ್ಕೆ ಹಸಿರು ನಿಶಾನೆ ತೋರಿಸಲಿದ್ದಾರೆ. ದೇಶದ ಹೆಚ್ಚುತ್ತಿರುವ ಆಧುನಿಕ ಸಾರಿಗೆ ಅಗತ್ಯವನ್ನು ಪೂರೈಸಲು ಅಭಿವೃದ್ಧಿಪಡಿಸಲಾಗಿರುವ 'ವಂದೇ ಭಾರತ್ ಸ್ಲೀಪರ್' ರೈಲು ಸಂಪೂರ್ಣ ಹವಾನಿಯಂತ್ರಿತವಾಗಿದೆ. ಪ್ರಯಾಣಿಕರಿಗೆ ಮಿತ ವೆಚ್ಚದಲ್ಲಿ ವಿಮಾನ ಪ್ರಯಾಣದಂತಹ ಅನುಭವ ನೀಡುತ್ತದೆ. ಈ ರೈಲು, ದೂರದ ಪ್ರಯಾಣವನ್ನು ವೇಗವಾಗಿ ಸುರಕ್ಷಿತವಾಗಿ ಹಾಗೂ ಹೆಚ್ಚು ಅನುಕೂಲಕರವಾಗಿಸುತ್ತದೆ. ಬಳಿಕ ಪ್ರಧಾನಿ ಅವರು, ಮಾಲ್ಡಾದಲ್ಲಿ ನಡೆಯಲಿರುವ ಸಾರ್ವಜನಿಕ ಸಮಾರಂಭದಲ್ಲಿ ೩ ಸಾವಿರ ೨೫೦ ಕೋಟಿ ರೂಪಾಯಿಗೂ ಅಧಿಕ ವೆಚ್ಚದ ವಿವಿಧ ರೈಲ್ವೆ ಮತ್ತು ರಸ್ತೆ ಮೂಲಸೌಕರ್ಯ ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಇದಲ್ಲದೆ, ಪಶ್ಚಿಮ ಬಂಗಾಳದ ನಾಲ್ಕು ಬೃಹತ್ ರೈಲ್ವೆ ಯೋಜನೆಗಳಿಗೂ ಶಿಲಾನ್ಯಾಸ ನೆರವೇರಿಸಲಿದ್ದಾರೆ. ಬಲೂರ್ ಘಾಟ್ ಮತ್ತು ಹಿಲಿ ನಡುವಿನ ಹೊಸ ರೈಲು ಮಾರ್ಗ ನ್ಯೂ ಜಲಪಾಯಿಗುರಿಯಲ್ಲಿ ಮುಂದಿನ ತಲೆಮಾರಿನ ಸಾಗಾಟ ನಿರ್ವಹಣಾ ವ್ಯವಸ್ಥೆ ಸಿಲಿಗುರಿ ಲೋಕೋಶೆಡ್‌ನ ಮೇಲ್ದರ್ಜೆಗೇರಿಸುವ ಕೆಲಸ ಹಾಗೂ ಜಲಪಾಯಿಗುರಿ ಜಿಲ್ಲೆಯಲ್ಲಿ ವಂದೇ ಭಾರತ್ ರೈಲು ನಿರ್ವಹಣಾ ಸೌಕರ್ಯದ ಆಧುನೀಕರಣದ ಕಾಮಗಾರಿ ಇವುಗಳಲ್ಲಿ ಸೇರಿವೆ. ಈ ಸೌಕರ್ಯಗಳು ಉತ್ತರ ಬಂಗಾಳದ ಪ್ರದೇಶದಲ್ಲಿ ಪ್ರಯಾಣಿಕ ಹಾಗೂ ಸರಕು ಸಾಗಾಟ ವ್ಯವಸ್ಥೆಯನ್ನು ಬಲಪಡಿಸಲಿದ್ದು, ಉದ್ಯೋಗ ಅವಕಾಶವನ್ನು ಸೃಷ್ಟಿಸಲಿವೆ. ಪ್ರಧಾನಿ ಅವರು ಇದೇ ಸಂದರ್ಭದಲ್ಲಿ ಮಾಲ್ಡಾದಿಂದ ನಾಲ್ಕು ಹೊಸ ಅಮೃತ್ ಭಾರತ್ ಎಕ್ಸ್‌ಪ್ರೆಸ್ ರೈಲುಗಳ ಸಂಚಾರಕ್ಕೂ ವರ್ಚುವಲ್ ಮೂಲಕ ಹಸಿರು ನಿಶಾನೆ ತೋರಿಸಲಿದ್ದಾರೆ.ಬಳಿಕ ಪ್ರಧಾನಿ ಅವರು, ಅಸ್ಸಾಂ ಗುವಾಹಟಿಯಲ್ಲಿ ಬೋಡೊ ಸಮುದಾಯದ ಶ್ರೀಮಂತ ಪರಂಪರೆಯನ್ನು ಬಿಂಬಿಸುವ ಬಗುರಂಬಾ ದ್ವೋಹವ್-೨೦೨೬ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಕಾರ್ಯಕ್ರಮದಲ್ಲಿ ಬೋಡೋ ಸಮುದಾಯದ ೧೦ ಸಾವಿರಕ್ಕೂ ಅಧಿಕ ಕಲಾವಿದರು ಬಗುರಂಬಾ ನೃತ್ಯವನ್ನು

ಸಾದರಪಡಿಸಲಿದ್ದಾರೆ. ಪ್ರಧಾನಿ ಅವರು ತಮ್ಮ ಎರಡನೇ ದಿವಸದ ಕಾರ್ಯಕ್ರಮದಲ್ಲಿ ಅಸ್ಸಾಂನ ಕಾಲಿಯಾಬೋರ್‌ನಲ್ಲಿ ಸುಮಾರು ೬ ಸಾವಿರದ ೯೫೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗುವ ಕಾಜಿರಂಗ ಮೇಲು ಕಾರಿಡಾರ್ ಯೋಜನೆಗೆ ಭೂಮಿ ಪೂಜೆ ನೆರವೇರಿಸಲಿದ್ದಾರೆ.

*********

ಪ್ರಸ್ತಾವಿತ ಬಿತ್ತನೆ ಬೀಜ ಕಾಯ್ದೆ - ೨೦೨೬ ರೈತರ ರಕ್ಷಣೆ, ಬಿತ್ತನೆ ಬೀಜ ಗುಣಮಟ್ಟ ಮತ್ತು ವ್ಯವಸ್ಥೆಯಲ್ಲಿ ಪಾರದರ್ಶಕತೆಯನ್ನು ಖಚಿತಪಡಿಸಿಕೊಳ್ಳುವ ಗುರಿಯನ್ನು ಹೊಂದಿರುವ ಐತಿಹಾಸಿಕ ಹೆಜ್ಜೆಯಾಗಿದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಪ್ರತಿಪಾದಿಸಿದ್ದಾರೆ. ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಷ್ಟ್ರವ್ಯಾಪಿ ಬಿತ್ತನೆ ಬೀಜ ಪತ್ತೆಹಚ್ಚುವ ವ್ಯವಸ್ಥೆಯನ್ನು ಸ್ಥಾಪಿಸಲಾಗುವುದು. ಬಿತ್ತನೆ ಬೀಜವನ್ನು ಎಲ್ಲಿ ಉತ್ಪಾದಿಸಲಾಯಿತು, ಯಾವ ವ್ಯಾಪಾರಿ ಅದನ್ನು ಪೂರೈಸಿದರು ಮತ್ತು ಯಾರು ಮಾರಾಟ ಮಾಡಿದರು ಎಂದುದನ್ನು ತಿಳಿಯುವ ವ್ಯವಸ್ಥೆಯನ್ನು ರಚಿಸಲು ಪ್ರಯತ್ನಿಸಲಾಗುತ್ತಿದೆ ಎಂದು ತಿಳಿಸಿದರು. ಪ್ರತಿ ಬಿತ್ತನೆ ಬೀಜ ಪ್ಯಾಕೇಟ್ ಕ್ಯೂಆರ್ ಕೋಡ್ ಅನ್ನು ಹೊಂದಿರುತ್ತದೆ, ಅದನ್ನು ಸ್ಕ್ಯಾನ್ ಮಾಡಿದಾಗ ರೈತರು ಅದರ ಮೂಲದ ಬಗ್ಗೆ ಸಂಪೂರ್ಣ ಮಾಹಿತಿ ಪಡೆಯಲು ಅನುವು ಮಾಡಿಕೊಡುತ್ತದೆ. ಇದು ನಕಲಿ ಅಥವಾ ಕಳಪೆ ಗುಣಮಟ್ಟದ ಬಿತ್ತನೆ ಬೀಜ ಮಾರಾಟವನ್ನು ತಡೆಯುವುದಲ್ಲದೆ, ಅಂತಹ ಬಿತ್ತನೆ ಬೀಜಗಳು ಮಾರುಕಟ್ಟೆ ಪ್ರವೇಶಿಸಿದರೆ ಸಂಬಂಧಪಟ್ಟವರ ವಿರುದ್ಧ ತ್ವರಿತ ಕ್ರಮ ಕೈಗೊಳ್ಳಲು ಅನುವು ಮಾಡಿಕೊಡುತ್ತದೆ ಎಂದು ಅವರು ವಿವರಿಸಿದರು. ಈ ಹಿಂದೆ ಕಳಪೆ ಗುಣಮಟ್ಟದ ಬಿತ್ತನೆ ಬೀಜ ಪೂರೈಕೆಗೆ ೫೦೦ ರೂಪಾಯಿವರೆಗೆ ದಂಡ ವಿಧಿಸಲಾಗುತ್ತಿತ್ತು. ಆದರೆ ಈಗ ೩೦ ಲಕ್ಷ ರೂಪಾಯಿವರೆಗೆ ದಂಡ ವಿಧಿಸುವ ಪ್ರಸ್ತಾಪವಿದೆ. ಯಾರಾದರು ಉದ್ದೇಶಪೂರ್ವಕವಾಗಿ ಅಪರಾಧ ಎಸಗಿದರೆ, ಅಂತಹವರಿಗೆ ಶಿಕ್ಷೆ ವಿಧಿಸುವ ಅವಕಾಶವೂ ಇದೆ. ಅಲ್ಲದೆ ಈಗ ಪ್ರತಿಯೊಂದು ಬಿತ್ತನೆ ಬೀಜ ಕಂಪನಿಯು ನೋಂದಾಯಿಸಿಕೊಳ್ಳುವುದು ಕಡ್ಡಾಯವಾಗಿದೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದರು.

*********

ಭಾರತದ ಡೀಪ್ ಟೆಕ್ ಸ್ಟಾರ್ಟ್ ಅಪ್ ಪರಿಸರ ವ್ಯವಸ್ಥೆಯು ವಿಸ್ತರಿಸುತ್ತಿದೆ. ಇದಕ್ಕೆ ಕೇಂದ್ರೀಕೃತ ನೀತಿ ಮತ್ತು ಹಣಕಾಸಿನ ಬೆಂಬಲ ಕಾರಣ ಎಂದು ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, ಇಂದು ಭಾರತದ ಶೇಕಡ ೮೦ರಷ್ಟು ಸ್ಟಾರ್ಟ್‌ಅಪ್‌ಗಳಿಗೆ ಕೃತಕ ಬುದ್ಧಿಮತ್ತೆ ಪ್ರಮುಖ ಅಂಶವಾಗಿದೆ. ಇಂಡಿಯಾ ಸೆಮಿಕಂಡಕ್ಟರ್ ಮಿಷನ್ ಅಡಿಯಲ್ಲಿ ಡಿಸೈನ್ಡ್ ಲಿಂಕ್ ಇನ್‌ಸೆಂಟಿವ್ ಯೋಜನೆ ಈವರೆಗೆ ೨೩ ಸ್ಟಾರ್ಟ್‌ಅಪ್‌ಗಳನ್ನು ಬೆಂಬಲಿಸಿದೆ ಎಂದು ತಿಳಿಸಿದ್ದಾರೆ. ಸಾಂಸ್ಥಿಕ ನಿಧಿಗಾಗಿ ಸೆಮಿಕಾನ್ ಇಂಡಿಯಾ-೨೦೨೫ರಲ್ಲಿ ಒಂದು ಶತಕೋಟಿ ಡಾಲರ್ ಇಂಡಿಯಾ ಡೀಪ್ ಟೆಕ್ ಒಪ್ಪಂದವನ್ನು ಘೋಷಿಸಲಾಗಿದೆ. ಒಂದು ಲಕ್ಷ ಕೋಟಿ ರೂಪಾಯಿಗಳ ನಿಧಿಯೊಂದಿಗೆ ಸಂಶೋಧನಾ ಅಭಿವೃದ್ಧಿ ಮತ್ತು ನಾವೀನ್ಯತೆಯ ನಿಧಿಯು, ನಾವೀನ್ಯತೆ ಸಾಮರ್ಥ್ಯಗಳನ್ನು ಬಲಪಡಿಸುತ್ತಿವೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ.

*********

ಸಂಸತ್, ರಾಜ್ಯಗಳ ವಿಧಾನಸಭೆಗಳು ಮತ್ತು ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳಾ ಸದಸ್ಯರ ಸಂಖ್ಯೆ ಗಣನೀಯವಾಗಿ ಹೆಚ್ಚಳವಾಗಿದೆ. ಅವರು ಸಾರ್ವಜನಿಕ ಆಡಳಿತದಲ್ಲಿ ಹೆಚ್ಚಾಗಿ ಭಾಗಿಯಾಗುತ್ತಿದ್ದಾರೆ ಎಂದು ರಾಜ್ಯಸಭೆ ಉಪಸಭಾಪತಿ ಹರಿವಂಶ್ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ಕಾಮನ್‌ವೆಲ್ತ್ ರಾಷ್ಟ್ರಗಳ ಸ್ಪೀಕರ್‌ಗಳ ೨೮ನೇ ಸಮ್ಮೇಳನ ಉದ್ದೇಶಿಸಿ ಮಾತನಾಡಿದ ಅವರು, ಸ್ಥಳೀಯ ಸಂಸ್ಥೆಗಳಲ್ಲಿ ಪ್ರಸ್ತುತ ಸುಮಾರು ೧.೫ ದಶಲಕ್ಷ ಮಹಿಳೆಯರು ಚುನಾಯಿತ

ಪ್ರತಿನಿಧಿಗಳಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಇದು ವಿಶ್ವದೆಲ್ಲೆಡೆ ಮಹಿಳಾ ರಾಜಕೀಯ ಪ್ರಾತನಿಧ್ಯದಲ್ಲಿ ಅತಿದೊಡ್ಡ ಪ್ರಯೋಗವಾಗಿದೆ ಎಂದು ತಿಳಿಸಿದರು. ಮಹಿಳಾ ನೇತೃತ್ವದ ಸ್ಥಳೀಯ ಸಂಸ್ಥೆಗಳು ಹೆಚ್ಚಿನ ಮಟ್ಟದ ಪಾರದರ್ಶಕತೆ, ನಿಕಟ ಮೇಲ್ವಿಚಾರಣೆ ಮತ್ತು ಬಲವಾದ ಹೊಣೆಗಾರಿಕೆಯನ್ನು ಪ್ರದರ್ಶಿಸುತ್ತಿವೆ ಎಂದರು. ಲೋಕಸಭೆ ಮತ್ತು ರಾಜ್ಯ ಶಾಸಕಾಂಗ ಸಭೆಗಳಲ್ಲಿ ಮಹಿಳೆಯರಿಗೆ ಶೇಕಡ ೩೩ರಷ್ಟು ಮೀಸಲಾತಿಯು ಸಂಸದೀಯ ಪ್ರಾತಿನಿಧ್ಯದಲ್ಲಿ ಲಿಂಗ ಸಮತೋಲನಕ್ಕೆ ಭಾರತದ ದೀರ್ಘಕಾಲೀನ ಬದ್ಧತೆಯನ್ನು ಪುನರುಚ್ಚರಿಸುತ್ತದೆ ಎಂದು ಹರಿವಂಶ್ ಹೇಳಿದರು.

*********

ಬೃಹನ್ ಮುಂಬೈ ಮಹಾನಗರ ಪಾಲಿಕೆ ಚುನಾವಣೆಯಲ್ಲಿ ಬಿಜೆಪಿ ಮತ್ತು ಏಕನಾಥ್ ಶಿಂಧೆ ನೇತೃತ್ವದ ಶಿವಸೇನೆ ಮೈತ್ರಿಕೂಟವು ೨೨೭ ಸ್ಥಾನಗಳ ಪೈಕಿ ೧೧೮ ಸ್ಥಾನಗಳನ್ನು ಗೆಲ್ಲುವ ಮೂಲಕ ಸ್ಪಷ್ಟ ಬಹುಮತವನ್ನು ಗಳಿಸಿದೆ. ಮಹಾರಾಷ್ಟ್ರ ರಾಜ್ಯ ಚುನಾವಣಾ ಆಯೋಗವು ನಿನ್ನೆ ಮಧ್ಯರಾತ್ರಿಯ ವರೆಗೆ ೨೯ ಮುನಿಸಿಪಲ್ ಕಾರ್ಪೊರೇಷನ್‌ಗಳ ೨ ಸಾವಿರದ ೮೬೯ ಸ್ಥಾನಗಳ ಪೈಕಿ ೨ ಸಾವಿರದ ೭೮೪ ಸ್ಥಾನಗಳಿಗೆ ಫಲಿತಾಂಶಗಳನ್ನು ಪ್ರಕಟಿಸಿದೆ. ಇದರಲ್ಲಿ ಒಂದು ಸಾವಿರದ ೩೭೨ ಸ್ಥಾನಗಳನ್ನು ಗೆಲ್ಲುವ ಮೂಲಕ ಬಿಜೆಪಿ ಏಕೈಕ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ. ಜನಪರ ಆಡಳಿತದ ಎನ್‌ಡಿಎ ಕಾರ್ಯಸೂಚಿಯನ್ನು ಬೆಂಬಲಿಸಿದ್ದಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಅವರು, ಮಹಾರಾಷ್ಟ್ರದ ಜನತೆಗೆ ಧನ್ಯವಾದ ಸಲ್ಲಿಸಿದ್ದಾರೆ.

*********

ಇರಾನ್‌ನಲ್ಲಿನ ಪ್ರಸ್ತುತ ಪರಿಸ್ಥಿತಿಯನ್ನು ಭಾರತ ಸೂಕ್ಷ್ಮವಾಗಿ ಗಮನಿಸುತ್ತಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ನವದೆಹಲಿಯಲ್ಲಿ ನಿನ್ನೆ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣದೀರ್ ಜೈಸ್ವಾಲ್, ಇತ್ತೀಚಿನ ದಿನಗಳಲ್ಲಿ ಇರಾನ್‌ನಲ್ಲಿನ ಪರಿಸ್ಥಿತಿಯನ್ನು ಪರಿಗಣಿಸಿ, ಭಾರತೀಯರು ಇರಾನ್‌ಗೆ ಭೇಟಿ ನೀಡುವುದನ್ನು ತಪ್ಪಿಸಲು ಸಚಿವಾಲಯವು ಕೆಲವು ಸಲಹೆಗಳನ್ನು ನೀಡಿದೆ. ಅಲ್ಲದೆ ಇರಾನ್‌ನಲ್ಲಿರುವವರು ಭಾರತಕ್ಕೆ ಹಿಂತಿರುಗುವಂತೆ ಸೂಚಿಸಲಾಗಿದೆ ಎಂದು ಹೇಳಿದರು. ಇನ್ನೊಂದೆಡೆ, ಚಬಹಾರ್ ಬಂದರಿನ ಕುರಿತು ಒಪ್ಪಂದವನ್ನು ರೂಪಿಸುವಲ್ಲಿ ಭಾರತವು, ಅಮೆರಿಕದೊಂದಿಗೆ ತೊಡಗಿಕೊಂಡಿದೆ ಎಂದು ಅವರು ತಿಳಿಸಿದರು.

*****ಧ್ವನಿ**** ರಣದೀರ್ ಜೈಸ್ವಾಲ್

ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರು, ನವದೆಹಲಿಯಲ್ಲಿ ನಿನ್ನೆ ಜಪಾನ್ ವಿದೇಶಾಂಗ ಸಚಿವ ತೋಶಿಮಿಟ್ಸು ಮೊಟೆಗಿ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಭಾರತ - ಜಪಾನ್ ಸಹಯೋಗದ ಪ್ರಮುಖ ಅಂಶಗಳ ಕುರಿತು ಉಭಯ ನಾಯಕರು ಚರ್ಚಿಸಿದರು. ನಂತರ ಉಭಯ ನಾಯಕರು ೧೮ನೇ ಭಾರತ - ಜಪಾನ್ ಕಾರ್ಯತಂತ್ರದ ಸಂವಾದದಲ್ಲಿ ಭಾಗವಹಿಸಿದ್ದರು ಎಂದು ರಣದೀರ್ ಜೈಸ್ವಾಲ್ ತಿಳಿಸಿದರು.

*********

ಗ್ರೀನ್‌ಲ್ಯಾಂಡ್‌ಅನ್ನು ಸ್ವಾಧೀನಪಡಿಸಿಕೊಳ್ಳುವ ಅಮೆರಿಕದ ಯೋಜನೆಯನ್ನು ವಿರೋಧಿಸುವ ದೇಶಗಳ ಮೇಲೆ ವ್ಯಾಪಾರ ಸುಂಕಗಳನ್ನು ವಿಧಿಸುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ್ದಾರೆ. ವಾಷಿಂಗ್ಟನ್ ಡಿಸಿಯಲ್ಲಿರುವ ಶ್ವೇತಭವನದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಆರ್ಟಿಕ್ ಪ್ರದೇಶದಲ್ಲಿ ರಷ್ಯಾ ಮತ್ತು ಚೀನಾದ ಬೆಳೆಯುತ್ತಿರುವ ಉಪಸ್ಥಿತಿಯಿಂದ ರಕ್ಷಿಸಲು ಅಮೆರಿಕಾಗೆ ಗ್ರೀನ್‌ಲ್ಯಾಂಡ್ ಮುಖ್ಯವಾಗಿದೆ ಎಂದು ಹೇಳಿದ್ದಾರೆ.

*********

ಜಿಂಬಾಬ್ವೆಯ ಬುಲಾವಾಯೋದಲ್ಲಿ ಇಂದು ನಡೆಯಲಿರುವ ೧೯ ವರ್ಷದೊಳಗಿನ ಪುರುಷರ ಏಕದಿನ ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯ ಎ ಗುಂಪಿನ ಎರಡನೇ ಪಂದ್ಯದಲ್ಲಿ ಭಾರತ, ಬಾಂಗ್ಲಾದೇಶ ತಂಡವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೧ ಗಂಟೆಗೆ ಪ್ರಾರಂಭವಾಗಲಿದೆ.

*********

ನವಿಮುಂಬೈನ ಡಾ. ಡಿ.ವೈ. ಪಾಟೀಲ್ ಸ್ಪೋರ್ಟ್ಸ್ ಅಕಾಡೆಮಿ ಕ್ರಿಕೆಟ್ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಮಹಿಳಾ ಪ್ರೀಮಿಯರ್ ಲೀಗ್ - ಡಬ್ಲ್ಯೂಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ೧೦ನೇ ಪಂದ್ಯದಲ್ಲಿ ಯುಪಿ ವಾರಿಯರ್ಸ್ ಮತ್ತು ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿದೆ. ನಿನ್ನೆ ನಡೆದ ಮತ್ತೊಂದು ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು - ಆರ್‌ಸಿಬಿ ತಂಡವು ಗುಜರಾತ್ ತಂಡವನ್ನು ೩೨ ರನ್‌ಗಳಿಂದ ಮಣಿಸಿದೆ.

*********

ಪ್ರವೀಣ್ ವಸಿಷ್ಠ ಅವರನ್ನು ಕೇಂದ್ರ ವಿಜಿಲೆನ್ಸ್ ಆಯೋಗದ ವಿಜಿಲೆನ್ಸ್ ಆಯುಕ್ತರನ್ನಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು ನೇಮಕ ಮಾಡಿದ್ದಾರೆ. ಕೇಂದ್ರ ವಿಜಿಲೆನ್ಸ್ ಆಯುಕ್ತರ ಮುಂದೆ ಪ್ರವೀಣ್ ವಸಿಷ್ಠ ಅವರು, ಪ್ರಮಾಣವಚನ ಸ್ವೀಕರಿಸಿದ್ದಾರೆ ಎಂದು ಕೇಂದ್ರ ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆ ಮತ್ತು ಪಿಂಚಣಿ ಸಚಿವಾಲಯ ತಿಳಿಸಿದೆ. ಪ್ರವೀಣ್ ವಸಿಷ್ಠ ಅವರು ಕಾನೂನುಜಾರಿ, ತನಿಖೆ ಮತ್ತು ಆಂತರಿಕ ಭದ್ರತೆಯಲ್ಲಿ ಮೂರು ದಶಕಗಳಿಗೂ ಹೆಚ್ಚು ಅನುಭವ ಹೊಂದಿದ್ದಾರೆ. ಅವರು ೧೯೯೧ರ ಬಿಹಾರ ಕೇಡರ್‌ನ ಐಪಿಎಸ್ ಅಧಿಕಾರಿಯಾಗಿದ್ದರು. ಕೇಂದ್ರದ ನಿಯೋಜನೆಯ ಮೇರೆಗೆ ಅವರು ಜಂಟಿ ಕಾರ್ಯದರ್ಶಿ, ಹೆಚ್ಚುವರಿ ಕಾರ್ಯದರ್ಶಿ ಮತ್ತು ಆಂತರಿಕ ಭದ್ರತೆಯನ್ನು ನಿರ್ವಹಿಸುವ ವಿಶೇಷ ಕಾರ್ಯದರ್ಶಿ ಸೇರಿದಂತೆ ಗೃಹ ಸಚಿವಾಲಯದಲ್ಲಿ ಪ್ರಮುಖ ಹುದ್ದೆಗಳನ್ನು ಹೊಂದಿದ್ದರು.

****END****